**Akashvani : Bangalore**
**Regional Bulletin In Kannada**
**25.05.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**25.05.2026 / 14.30 hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

**೧. ಇಂಧನ ಬೆಲೆಯ ಹೊರೆ ತಗ್ಗಿಸಲು ಕೇಂದ್ರಕ್ಕೆ- ರಾಜ್ಯ ಸರ್ಕಾರ ಆಗ್ರಹ**

**೨. ಆರೋಗ್ಯವಂತ ನಾಗರಿಕರಿಂದಲೇ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ**

**೩. ಡೀಮ್ಡ್ ಅರಣ್ಯ ಲೋಪ; ಸುಪ್ರೀಂಕೋರ್ಟ್‌ಗೆ ಮರುಮನವಿ ಸಲ್ಲಿಸಲು ಸಮಿತಿ ರಚನೆ- ಸಚಿವ ಈಶ್ವರ ಬಿ ಖಂಡ್ರೆ**

**೪. ಭಟ್ಕಳ ನದಿ ದುರಂತ; ೧೧ ಮಂದಿ ಮೃತರ ಅಂತ್ಯಸಂಸ್ಕಾರ; ಸಚಿವ ಮಂಕಾಳ ವೈದ್ಯರಿಂದ ಅಂತಿಮ ದರ್ಶನ**

**<><*<><>*><>**

ಕೇಂದ್ರ ಸರ್ಕಾರ, ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ನಿರಂತರವಾಗಿ ಹೆಚ್ಚಿಸುತ್ತಿರುವುದನ್ನು ಖಂಡಿಸಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಜಂಟಿ ಮಾಧ್ಯಮ ಹೇಳಿಕೆ ಬಿಡುಗಡೆಗೊಳಿಸಿದರು. ಕಳೆದ ೧೧ ದಿನಗಳಲ್ಲಿ ಇಂಧನ ದರವನ್ನು ಪ್ರತಿ ಲೀಟರ್‌ಗೆ ೭ ರೂಪಾಯಿ ೫೨ ಪೈಸೆಯಷ್ಟು ಹೆಚ್ಚಿಸಲಾಗಿದ್ದು, ಬೆಂಗಳೂರಿನಲ್ಲಿ ಪೆಟ್ರೋಲ್ ಬೆಲೆ ೧೧೦ರ ಗಡಿ ದಾಟಿದೆ. ಇದು ಕಳೆದ ೭೮ ವರ್ಷಗಳ ಇತಿಹಾಸದಲ್ಲೇ ಅತ್ಯಂತ ಗರಿಷ್ಠ ಮಟ್ಟವಾಗಿದ್ದು, ಜನಸಾಮಾನ್ಯರು, ರೈತರು ಹಾಗೂ ಗೃಹಿಣಿಯರ ದೈನಂದಿನ ಜೀವನಕ್ಕೆ ತೀವ್ರ ಹೊಡೆತ ನೀಡಿದೆ ಎಂದು ನಾಯಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೇಂದ್ರದ ಈ ದುಬಾರಿ ನೀತಿಯಿಂದಾಗಿ ಕೇವಲ ಇಂಧನ ಮಾತ್ರವಲ್ಲದೆ ಗೃಹಬಳಕೆಯ ಗ್ಯಾಸ್, ವಾಣಿಜ್ಯ ಸಿಲಿಂಡರ್ ಹಾಗೂ ಸಿಎನ್‌ಜಿ ಬೆಲೆಗಳೂ ಗಗನಕ್ಕೇರಿದ್ದು, ಅಗತ್ಯ ವಸ್ತುಗಳ ಬೆಲೆ ಏರಿಕೆಗೆ ಕಾರಣವಾಗಿದೆ. ಕಳೆದ ೧೨ ವರ್ಷಗಳಲ್ಲಿ ಕೇಂದ್ರ ಸರ್ಕಾರವು ಇಂಧನ ತೆರಿಗೆಯಿಂದ ೪೩ ಲಕ್ಷ ಕೋಟಿ ರೂಪಾಯಿ ಹಾಗೂ ಆರ್‌ಬಿಐ ನಿಧಿಯಿಂದ

೧೪ ಲಕ್ಷ ಕೋಟಿ ರೂಪಾಯಿ ಸೇರಿದಂತೆ ಒಟ್ಟು ೫೭ ಲಕ್ಷ ಕೋಟಿ ರೂಪಾಯಿಯಷ್ಟು ಬೃಹತ್ ಮೊತ್ತವನ್ನು ಸಾರ್ವಜನಿಕರಿಂದ ಸಂಗ್ರಹಿಸಿದೆ ಎಂದು ನಾಯಕರು ದೂರಿದ್ದಾರೆ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಮತ್ತು ಎಲ್‌ಪಿಜಿ ಬೆಲೆಗಳು ಕುಸಿದಿದ್ದರೂ, ದೇಶದಲ್ಲಿ ಅಬಕಾರಿ ಸುಂಕವನ್ನು ಪದೇ ಪದೇ ಹೆಚ್ಚಿಸಲಾಗುತ್ತಿದೆ ಎಂದು ಆಕ್ಷೇಪಿಸಿರುವ ರಾಜ್ಯ ಸರ್ಕಾರ, ತಕ್ಷಣವೇ ಈ ಇಂಧನ ಹೊರೆಯನ್ನು ನಿಲ್ಲಿಸಿ ಬೆಲೆಗಳನ್ನು ಕಡಿತಗೊಳಿಸಬೇಕೆಂದು ಆಗ್ರಹಿಸಿದೆ.

<><*<><>*><>

ಆರೋಗ್ಯವಂತ ಜನರಿಂದಲೇ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನ ಬಸವೇಶ್ವರ ನಗರದಲ್ಲಿಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ೧೦೮ ಆರೋಗ್ಯ ಕವಚ ಕೇಂದ್ರೀಕೃತ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಈ ಅತ್ಯಾಧುನಿಕ ಕೇಂದ್ರ ದೇಶದಲ್ಲೇ ಮೊದಲನೆಯದಾಗಿದ್ದು, ಬೇರೆ ರಾಜ್ಯಗಳಲ್ಲಿ ನೀಡಲು ಸಾಧ್ಯವಾಗದ ಅತ್ಯಾಧುನಿಕ ಆರೋಗ್ಯ ಸೇವೆಯನ್ನು ಕರ್ನಾಟಕದಲ್ಲಿ ಜನತೆಗೆ ದೊರಕಿಸಿಕೊಡುವ ಧ್ಯೇಯದೊಂದಿಗೆ ಈ ಕೇಂದ್ರಕ್ಕೆ ಚಾಲನೆ ನೀಡಲಾಗಿದೆ ಎಂದರು. ಎಲ್ಲಾ ಭಾಗ್ಯಗಳಿಗಿಂತ ಆರೋಗ್ಯ ಭಾಗ್ಯವೇ ಮೊದಲು. ಆರ್ಥಿಕ, ಸಾಮಾಜಿಕ ಬೆಳವಣಿಗೆ ಪ್ರತಿಯೊಬ್ಬರಿಗೂ ಎಷ್ಟು ಮುಖ್ಯವೋ, ಆರೋಗ್ಯವೂ ಅಷ್ಟೇ ಮುಖ್ಯ ಎಂದು ಹೇಳಿದರು.

<><*<><>*><>

ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ವಹಿಸುತ್ತಿರುವ ಬಿಐಎಎಲ್ ಸಂಸ್ಥೆಯಲ್ಲಿ ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ನಿಗಮ ಕೆಎಸ್‌ಐಐಡಿಸಿ ಹೊಂದಿರುವ ಶೇಕಡಾ ೧೩ ಹೂಡಿಕೆಗೆ ೨೦೨೫-೨೬ನೇ ಸಾಲಿನಲ್ಲಿ ೧೬.೪೯ ಕೋಟಿ ರೂಪಾಯಿ ಲಾಭಾಂಶ ಲಭಿಸಿದ್ದು, ಲಾಭಾಂಶದ ಚೆಕ್ ಅನ್ನು ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಲಾಯಿತು. ಕೆಎಸ್‌ಐಐಡಿಸಿ ಪರವಾಗಿ ಬಿಐಎಎಲ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಹರಿ ಕೆ ಮರಾರ್ ಅವರು ಚೆಕ್ ಹಸ್ತಾಂತರಿಸಿದರು. ಬೃಹತ್ ಮತ್ತು ಮಧ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಹಾಗೂ ಕೆಎಸ್‌ಐಐಡಿಸಿಯ ವ್ಯವಸ್ಥಾಪಕ ನಿರ್ದೇಶಕರಾದ ಖುಷ್ಬೂ ಗೋಯಲ್ ಚೌಧರಿ ಉಪಸ್ಥಿತರಿದ್ದರು.

<><*<><>*><>

ಡೀಮ್ಡ್ ಅರಣ್ಯ ಪ್ರದೇಶಗಳ ಗುರುತಿಸುವಿಕೆಯಲ್ಲಿ ಈ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಆಗಿರುವ ತಪ್ಪುಗಳನ್ನು ಸರಿಪಡಿಸಲು ರಾಜ್ಯ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ. ಕಾರ್ಕಳದಲ್ಲಿ ವಲಯ ಅರಣ್ಯಾಧಿಕಾರಿಗಳ ಮತ್ತು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ನೂತನ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಈ ತಾಂತ್ರಿಕ ಲೋಪದಿಂದಾಗಿ ಸರ್ಕಾರಿ ಆಸ್ಪತ್ರೆ, ಶಾಲೆ, ಅಂಗನವಾಡಿ ಹಾಗೂ ಸಾರ್ವಜನಿಕರ ಪಟ್ಟಾ ಭೂಮಿಗಳು ಅರಣ್ಯ ವ್ಯಾಪ್ತಿಗೆ ಸೇರಿ ಬಡ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಸಮಸ್ಯೆಯನ್ನು ಇತ್ಯರ್ಥಪಡಿಸಲು ಈಗ ಕೊನೆಯ ಅವಕಾಶ ಸಿಕ್ಕಿದ್ದು, ಸುಪ್ರೀಂಕೋರ್ಟ್‌ಗೆ ಮರು ಮನವಿ ಸಲ್ಲಿಸಲು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ವಿಶೇಷ ಸಮಿತಿಗಳನ್ನು ರಚಿಸಲಾಗಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಅರಣ್ಯ ರಕ್ಷಣೆಯಲ್ಲಿ ತೊಡಗಿರುವ ಮುಂಚೂಣಿ ಸಿಬ್ಬಂದಿಯ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ಆನೆ ಕಾರ್ಯಪಡೆ, ಕಳ್ಳಬೇಟೆ ನಿಗ್ರಹ ಪಡೆ ಸೇರಿದಂತೆ ಮುಂಚೂಣಿ ಸಿಬ್ಬಂದಿಗೆ ವಸತಿ ಗೃಹ, ಅಪಾಯ ಭತ್ಯೆ ಹಾಗೂ ಆಧುನಿಕ ಸುರಕ್ಷತಾ ಸಲಕರಣೆಗಳನ್ನು ಒದಗಿಸುವುದನ್ನು ಖಾತ್ರಿಪಡಿಸಿಕೊಳ್ಳಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸಚಿವರು ಅರಣ್ಯ ಹುತಾತ್ಮರಿಗೆ ಪುಷ್ಪನಮನ ಸಲ್ಲಿಸಿದರು.

<><*<><>*><>

ಉತ್ತರಕನ್ನಡ ಜಿಲ್ಲೆಯ ಭಟ್ಕಳದಲ್ಲಿ ಕಪ್ಪೆ ಚಿಪ್ಪು ತೆಗೆಯಲು ಹೋಗಿ ಮೃತಪಟ್ಟ ೧೧ ಜನರ ಸಾಮೂಹಿಕ ಅಂತ್ಯ ಸಂಸ್ಕಾರ ಭಟ್ಕಳದ ಶಾರದಾಹೊಳೆಯಲ್ಲಿ ನಡೆಯಿತು. ಮೃತರ ಅಂತಿಮ ದರ್ಶನ ಪಡೆದು ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ, ಭಟ್ಕಳದ ಇತಿಹಾಸದಲ್ಲೇ ಇದೊಂದು ದುರಂತ ಘಟನೆಯಾಗಿದೆ ಎಂದು ಶೋಕ ವ್ಯಕ್ತಪಡಿಸಿದರು. ಏಪ್ರಿಲ್ - ಮೇ ತಿಂಗಳಲ್ಲಿ ಕಪ್ಪೆ ಚಿಪ್ಪು ತೆಗೆಯುವುದು ಸಾಮಾನ್ಯ. ಆದರೆ ಈ ದುರ್ಘಟನೆ ಗೆ ನಿಖರ ಕಾರಣ ತಿಳಿದುಬಂದಿಲ್ಲ. ಅಧಿಕಾರಿಗಳಿಗೆ ತನಿಖೆ ನಡೆಸಲು ಸೂಚಿಸಲಾಗಿದ್ದು, ಮೃತರ ಕುಟುಂಬಸ್ಥರ ನೆರವಿಗೆ ಸರ್ಕಾರ ಬದ್ಧವಾಗಿದೆ. ರಕ್ಷಿಸಲ್ಪಟ್ಟವರ ವೈದ್ಯಕೀಯ ಚಿಕಿತ್ಸಾ ವೆಚ್ಚವನ್ನು ಭರಿಸುವುದರ ಜೊತೆಗೆ, ಮೃತರ ಮಕ್ಕಳಿಗೆ ಶಿಕ್ಷಣದ ನೆರವು ನೀಡಲು ಸಿದ್ಧವಿರುವುದಾಗಿ ತಿಳಿಸಿದರು. ಈ ಘಟನೆ ಕುರಿತು ನಿನ್ನೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿ, ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದರು ಹಾಗೂ ಮೃತರ ವಾರಸುದಾರರಿಗೆ ತಲಾ ಎರಡು ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಘೋಷಿಸಿದ್ದಾರೆ.

<><*<><>*><>

ರಾ?ಪತಿ ದ್ರೌಪದಿ ಮುರ್ಮು, ಇಂದು ಸಂಜೆ ಹೊಸದಿಲ್ಲಿಯ ರಾ?ಪತಿ ಭವನದಲ್ಲಿ ಆಯೋಜಿತ, ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ, ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ೨೦೨೬ ರ ಮೊದಲ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾ?ಪತಿಗಳು, ೨ ಪದ್ಮವಿಭೂ?ಣ, ೬ ಪದ್ಮಭೂ?ಣ ಹಾಗೂ ೫೮ ಪದ್ಮಶ್ರೀ ಸೇರಿದಂತೆ, ೬೬ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

**<><*<><>*><>**

ನಾಟಕ ರಚನೆ, ನಿರ್ದೇಶನ, ಕಿರುಚಿತ್ರಗಳ ನಿರ್ಮಾಣ, ಅಭಿನಯ ಹಾಗೂ ರಂಗಭೂಮಿಗೆ ಸಂಬಂಧಿಸಿದ ವಿವಿಧ ವಿಷಯಗಳ ಪ್ರಾಯೋಗಿಕ ತರಬೇತಿ ಕುರಿತು. ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ಜೂನ್ ೧ ರಿಂದ ೧೦ ದಿನಗಳ ಕಾಲ ರಂಗಭೂಮಿ ಕಾರ್ಯಾಗಾರ ಮತ್ತು ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ರಂಗಭೂಮಿ ಮತ್ತು ಕಿರುಚಿತ್ರ ನಿರ್ಮಾಣದಲ್ಲಿ ಆಸಕ್ತಿಯಿರುವ ಅಭ್ಯರ್ಥಿಗಳು ತಮ್ಮ ಪರಿಚಯ ಪತ್ರ ಹಾಗೂ ರಂಗಭೂಮಿ ಹಿನ್ನೆಲೆಯ ಅನುಭವದ ವಿವರಗಳನ್ನು ಇದೇ ೩೦ರ ಒಳಗಾಗಿ ವಿಶ್ವವಿದ್ಯಾಲಯದ ನಾಟಕ ವಿಭಾಗ ಮುಖಸ್ಥರಿಗೆ ಸಲ್ಲಿಸಬಹುದಾಗಿದೆ.

**<><*<><>*><>**

ನಗರ ನಿವಾಸಿ-ಕೇಂದ್ರಿತ ಆಧಾರ್ ಸೇವೆಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಭಾರತೀಯ ವಿಶಿಷ್ಟ ಗುರುತಿನ ಪ್ರಾಧಿಕಾರದ ಬೆಂಗಳೂರು ಪ್ರಾದೇಶಿಕ ಕಚೇರಿ ಮತ್ತೊಂದು ಮಹತ್ವದ ಹೆಜ್ಜೆಯನ್ನಿರಿಸಿದ್ದು, ವಿಜಯಪುರ ನಗರದಲ್ಲಿ ಹೊಸ ಆಧಾರ್ ಸೇವಾ ಕೇಂದ್ರವನ್ನು ಕಾರ್ಯಾರಂಭಿಸಲಾಗಿದೆ ಎಂದು ವಿಜಯಪುರ ಜಿಲ್ಲಾಧಿಕಾರಿಗಳ ಕಚೇರಿ ತಿಳಿಸಿದೆ. ವಿಜಯಪುರ ಆಧಾರ್ ಸೇವಾ ಕೇಂದ್ರಗಳ ಪೈಕಿ ಇದು ಬಿ ಮಾದರಿ ಕೇಂದ್ರವಾಗಿದ್ದು, ನಿವಾಸಿಗಳಿಗೆ ತಡೆರಹಿತ ಆಧಾರ್ ಸಂಬಂಧಿತ ಸೇವೆ ಒದಗಿಸಲು ಕಾರ್ಯಾಚರಣಾ ಕಿಟ್ ಗಳನ್ನು ಈ ಕೇಂದ್ರದಲ್ಲಿ ಅಳವಡಿಸಲಾಗಿದೆ. ಈ ಆಧಾರ್ ಸೇವಾ ಕೇಂದ್ರವು ಆಧಾರ್ ನೋಂದಣಿ, ಬಯೋಮೆಟ್ರಿಕ್ ನವೀಕರಣಗಳು,ದೋಷ ತಿದ್ದುಪಡಿ ಮತ್ತು ಕುಂದು-ಕೊರತೆ ನಿವಾರಣಾ ಸೇವೆಗಳನ್ನು ಒಂದೇ ಸೂರಿನಡಿ ಒದಗಿಸುತ್ತದೆ. ಈ ಕೇಂದ್ರವು ವಾರದ ಎಲ್ಲ ದಿನಗಳಲ್ಲಿ ಕಾರ್ಯನಿರ್ವಹಿಸುತ್ತದೆ. ಜಿಲ್ಲೆಯ ೫ ರಿಂದ ೧೭ ವರ್ಷದ ಒಟ್ಟು ೬೮ ಸಾವಿರ ಮಕ್ಕಳ ಕಡ್ಡಾಯ ಬಯೋಮೆಟ್ರಿಕ್ ಅಪಡೇಟ್ ಸೌಲಭ್ಯವನ್ನು ಸೆಪ್ಟೆಂಬರ್ ೩೦ರವರೆಗೆ ನೀಡಲು ಉಚಿತವಾಗಿ ಅವಕಾಶ ಕಲ್ಪಿಸಲಾಗಿದೆ.

**<><*<><>*><>**

ಯುಜಿ, ಸಿಇಟಿ -೨೦೨೬, ಸೀಟು ಹಂಚಿಕೆ ಬಗ್ಗೆ, ಜಾಗೃತಿ ಮೂಡಿಸಲು, ರಾಜ್ಯದ ೬೫ ಸರ್ಕಾರಿ ಹಾಗೂ ಅನುದಾನಿತ, ಇಂಜಿನಿಯರಿಂಗ್ ಮತ್ತು ವೈದ್ಯಕೀಯ, ದಂತ ವೈದ್ಯಕೀಯ ಕಾಲೇಜುಗಳಲ್ಲಿ, ಇಂದಿನಿಂದ ಇದೇ ೩೦ರವರೆಗೆ, ಮಂಥನ ಕಾರ್ಯಕ್ರಮ, ಆಯೋಜಿಸಲಾಗಿದೆ. cetonline.karnataka.gov.in/manthana2026 ಲಿಂಕ್ ಬಳಸಿ, ಹೆಸರು ನೋಂದಾಯಿಸಿ ಪಾಲ್ಗೊಳ್ಳುವಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ, ಕಾರ್ಯನಿರ್ವಾಹಕ ನಿರ್ದೇಶಕ, ಎಚ್.ಪ್ರಸನ್ನ, ಕೋರಿದ್ದಾರೆ.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ, ಜನಪ್ರಿಯ ’ಮನ್ ಕಿ ಬಾತ್’ನ ೧೩೪ನೇ ಆವೃತ್ತಿ, ಈ ತಿಂಗಳ ೩೧ ರಂದು, ಬೆಳಗ್ಗೆ ೧೧ ಗಂಟೆಗೆ ಪ್ರಸಾರವಾಗಲಿದೆ. ನಾಗರಿಕರು ತಮ್ಮ ಅಭಿಪ್ರಾಯಗಳನ್ನು, ಈ ತಿಂಗಳ ೨೯ ರೊಳಗೆ, ಒಥಿ ಉov.iಟಿ ಮೂಲಕ, ಹಂಚಿಕೊಳ್ಳಬಹುದು.

**<><*<><>*><>**

ಜೂನ್ ೧ನೇ ತಾರೀಖಿನಂದು ರಾಜ್ಯಾದ್ಯಂತ ಸರ್ಕಾರಿ ಶಾಲೆಗಳಲ್ಲಿ, ಶಾಲಾ ಪ್ರಾರಂಭೋತ್ಸವ ನಡೆಯಲಿದೆ.  ಎಲ್ಲ ಶಾಲೆಗಳಲ್ಲಿ, ಏಕಕಾಲಕ್ಕೆ ನಡೆಯಲಿರುವ, ’ಮಹಾ ಪೋ?ಕ-ಶಿಕ್ಷಕರ ಸಭೆಯನ್ನು ಉದ್ದೇಶಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಶಾಲಾ ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ, ವಿಡಿಯೋ ಸಂವಾದದ ಮೂಲಕ  ಮಾತನಾಡಲಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**